ನಿ-330
ಶ್ರೀ-93

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಎಸ್.ಎಲ್. ಬೋಜೇಗೌಡ, ಶ್ರೀ ಕೆ.ಎ.ತಿಪ್ಪೇಸ್ವಾಮಿ ಹಾಗೂ ಶ್ರೀ ಬಿ.ಎಂ.ಫಾರೂಖ್ ಇವರು ನಿಯಮ-330 ರಡಿಯಲ್ಲಿ ಸಲ್ಲಿಸಿರುವ ಸೂಚನಾ ಪತ್ರಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ:**

**ವಿಷಯ:**

ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿಧ್ಯಾಭ್ಯಾಸ ಮಾಡುತ್ತಿದ್ದ, ನಮ್ಮ ರಾಜ್ಯದ ವಿದ್ಯಾರ್ಥಿಗಳು ಯುದ್ಧದ ಕಾರಣ ನಮ್ಮ ರಾಜ್ಯಕ್ಕೆ ಮರಳಿದ್ದು, ಸದರಿ ವಿದ್ಯಾರ್ಥಿಗಳಿಗೆ ನಮ್ಮ ರಾಜ್ಯದಲ್ಲೇ ವೈದ್ಯಕೀಯ ವಿದ್ಯಾಭ್ಯಾಸವನ್ನು ಮಾಡಲು ಅನುಕೂಲವಾಗುವಂತೆ ವಿಶೇಷ ನಿಯಮಗಳನ್ನು ರೂಪಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿರುವ ಬಗ್ಗೆ.

**ಉತ್ತರ:-**

ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನಮ್ಮ ರಾಷ್ಟ್ರದಲ್ಲಿ ವೈದ್ಯಕೀಯ ಶಿಕ್ಷಣ ನೀತಿಯನ್ನು ನಿರೂಪಿಸುವ ಅಗ್ರ ಮಾನ್ಯ ಶಾಸನ ಬದ್ಧ ಸಂಸ್ಥೆಯಾಗಿರುತ್ತದೆ. ಪ್ರಸ್ತುತ ಹೊರದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆದ ವಿದ್ಯಾರ್ಥಿಗಳು ನಮ್ಮ ದೇಶದಲ್ಲಿ ವೈದ್ಯಕೀಯ ಸೇವೆಯನ್ನು ಮಾಡಲು ಇಚ್ಛಿಸಿದ್ದಲ್ಲಿ Foreign Medical Graduates Examination(FMGE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕಿರುತ್ತದೆ. ಸದ್ಯಕ್ಕೆ ಈ ಪರೀಕ್ಷೆಯಲ್ಲಿ ಯಾವುದೇ ವಿನಾಯಿತಿ ನೀಡಲಾಗಿರುವುದಿಲ್ಲ, ಉಕ್ರೇನ್ ದೇಶದಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳು ಯುದ್ಧದ ಕಾರಣದಿಂದ ರಾಜ್ಯಕ್ಕೆ ಮರಳಿದ್ದಾರೆ. ಇದೊಂದು ವಿಶೇಷ ಸಂದರ್ಭವಾಗಿದ್ದು, ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಅವಶ್ಯಕ ಕ್ರಮ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದನೆ ನಡೆಸಿ ಹಾಗೂ ಕ್ಷೇತ್ರಪರಿಣಿತರೊಂದಿಗೆ ಚರ್ಚಿಸಿ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನೀಡುವ ಸೂಚನೆಗಳೊಂದಿಗೆ ಪರಿಹಾರ ನೀಡುವಲ್ಲಿ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

**ಕಡತ ಸಂ: ಎಂಇಡಿ 39 ಆರ್‌ಜಿಯು 2022**

(ಡಾ: ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.